# ಕರ್ನಾಟಕ ಗೃಹ ಮಂಡಳಿ

Karnataka Housing Board
Building communities

**ಸಂಖ್ಯೆ: ಕಗೃಮಂ/ಉಪ್ರವ್ಯ(ಗ್ರಾಸೇ)/ಹಂಚಿಕೆ/ಸೂ.ನ.4ನೇ ಹಂತ/ಬೇಡಿಕೆ ಸಮೀಕ್ಷೆ/2019–20**

**ದಿನಾಂಕ: 13–12–2019**

## ಬೆಂಗಳೂರು ನಗರ ಜಿಲ್ಲೆ, ಅನೇಕಲ್ ತಾಲ್ಲೂಕಿನ ಕೋನಸಂದ್ರ, ಬೊಮ್ಮಂಡಹಳ್ಳಿ ಕಾಡುಜಕ್ಕನಹಳ್ಳಿ, ಇಂಡ್ಲವಾಡಿ ಮತ್ತು ಬಗ್ಗನದೊಡ್ಡಿ ಗ್ರಾಮಗಳಲ್ಲಿ ಸೂರ್ಯನಗರ 4ನೇ ಹಂತದ ವಸತಿ ಯೋಜನೆಗೆ ಬೇಡಿಕೆ ಸಮೀಕ್ಷೆ ಪ್ರಕಟಣೆ

ಕರ್ನಾಟಕ ಗೃಹ ಮಂಡಳಿ ವತಿಯಿಂದ ಬೆಂಗಳೂರು ನಗರ ಜಿಲ್ಲೆ ಅನೇಕಲ್ ತಾಲ್ಲೂಕಿನ ಕೋನಸಂದ್ರ, ಬೊಮ್ಮಂಡಹಳ್ಳಿ ಕಾಡುಜಕ್ಕನಹಳ್ಳಿ, ಇಂಡ್ಲವಾಡಿ ಮತ್ತು ಬಗ್ಗನದೊಡ್ಡಿ ಗ್ರಾಮಗಳಲ್ಲಿ ಒಟ್ಟು 1938ಎಕರೆ–15ಗುಂಟೆ ಜಮೀನಿನಲ್ಲಿ ಮಂಡಳಿಯು ಉತ್ತಮ ಗುಣಮಟ್ಟದ ವಸತಿ ನಿವೇಶನ/ಮನೆಗಳನ್ನು ಅಭಿವೃದ್ಧಿಪಡಿಸಿ, ಯೋಜನೆಗಳನ್ನು ಅನುಷ್ಠಾನಗೊಳಿಸಲು ಸಾರ್ವಜನಿಕರಿಗೆ ಮನೆ/ನಿವೇಶನಗಳ ಹಂಚಿಕೆ ಮಾಡುವ ಸಲುವಾಗಿ ಬೇಡಿಕೆ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ,

ಸದರಿ ಯೋಜನೆಯಲ್ಲಿ ರಸ್ತೆ, ಒಳಚರಂಡಿ ವ್ಯವಸ್ಥೆ, ಬೀದಿ ದೀಪ, ನೀರು ಸರಬರಾಜು ಇನ್ನಿತರೆ ಉತ್ತಮ ನಾಗರೀಕ ಸೌಕರ್ಯಕ್ಕಾಗಿ ವಾಣಿಜ್ಯ ನಿವೇಶನಗಳು ಮತ್ತು ಶಾಲೆ ಹಾಗೂ ಉದ್ಯಾನವನ ಮುಂತಾದ ಉದ್ದೇಶಗಳಿಗಾಗಿ ನಿವೇಶನಗಳನ್ನು ಮೀಸಲಿರಿಸಲಾಗಿದೆ. ಈ ಯೋಜನೆಯಲ್ಲಿ ಮಂಡಳಿ ನಿಯಮಾವಳಿಗೆ ಅನುಗುಣವಾಗಿ ನಿವೇಶನಗಳನ್ನು ಹೊಂದಲು ಬಯಸುವ ಆಸಕ್ತ ಸಾರ್ವಜನಿಕರು ಅರ್ಜಿಸಲ್ಲಿಸಿ ನೋಂದಾಯಿಸಿಕೊಳ್ಳಬಹುದಾಗಿದೆ,

| ಕ್ರ.ಸಂ. | ಸ್ವತ್ತಿನ ವರ್ಗ | ಲಭ್ಯವಾಗುವ ಅಂದಾಜು ಸ್ವತ್ತುಗಳು | ಸ್ವತ್ತುಗಳ ಅಳತೆ ಮೀಟರ್‌ಗಳಲ್ಲಿ | ನೊಂದಣಿ ಶುಲ್ಕ ರೂ.ಗಳಲ್ಲಿ | ಅರಂಭಿಕ ಠೇವಣಿ |
|---|---|---|---|---|---|
| 1 | EWS | 4648 | 6x9 | 300/- | 10000/- |
| 2 | LIG | 8135 | 9x12 | 500/- | 20000/- |
| 3 | MIG | 6508 | 9x15 | 1000/- | 30000/- |
| 4 | HIG-I | 1115 | 12x18 | 1500/- | 50000/- |
| 5 | HIG-II | 558 | 15x24 | | 75000/- |
| **ವಿಶೇಷ ಸೂಚನೆ : ನಿವೇಶನಗಳಿಗೆ ಮಂಡಳಿ ವತಿಯಿಂದ ನಿಗದಿಪಡಿಸಿದ ಅಂದಾಜು ದರ ಪ್ರತಿ ಚ.ಅಡಿಗೆ ರೂ. 1500/– (ಪ್ರತಿ ಚ.ಮೀಟರ್‌ಗೆ ರೂ. 16146/–)** | | | | | |

**ಅರ್ಜಿಗಳ ನೋಂದಣಿಗೆ ನಿಯಮ ಮತ್ತು ಷರತ್ತುಗಳು**

1. ಈ ಅಧಿಕೃತ ಪ್ರಕಟಣೆಯನ್ನು ನಿಖರ ಬೇಡಿಕೆ ಸಮೀಕ್ಷೆಗಾಗಿ ಸಾರ್ವಜನಿಕರ ಹಿತದೃಷ್ಟಿಯಿಂದ ಕರೆಯಲಾಗಿದೆ.
2. ಅರ್ಜಿ ಸಲ್ಲಿಸುವವರು ಅರ್ಜಿ ಶುಲ್ಕ ರೂ. 100/– ಪಾವತಿ ಮಾಡಿ, ಅರ್ಜಿಗಳನ್ನು ಸಂಬಂಧಪಟ್ಟ ಜಿಲ್ಲಾ ಯೋಜನಾ ಕಛೇರಿಯಿಂದ ಹಾಗೂ ಸಂಬಂಧಿಸಿದ ಬ್ಯಾಂಕ್ ಶಾಖೆಗಳಿಂದ ಪಡೆಯತಕ್ಕದ್ದು.

| Sl. No. | Name of the Bank & Branch | Account No. |
|---|---|---|
| 1. | Corporation Bank, S.C. Road Branch, Bangalore | 510101002828811 |
| 2. | Axis Bank, Jayanagar Branch, Bangalore. | 052010100380348 |
| 3. | Indusind Bank, Basavanagudi Branch, Bangalore | 100021432876 |

3. ನೊಂದಣಿ ಶುಲ್ಕ ಮತ್ತು ಆರಂಭಿಕ ಠೇವಣಿ ಹಣವನ್ನು Housing Commissioner, Karnataka Housing Board, Bangalore (Payable at Bangalore) ಇವರ ಹೆಸರಿನಲ್ಲಿ ಡಿ.ಡಿ. ಪಡೆದು, ಭರ್ತಿ ಮಾಡಿದ ಅರ್ಜಿಯೊಂದಿಗೆ ಮೇಲೆ ತಿಳಿಸಿರುವ ಬ್ಯಾಂಕುಗಳಲ್ಲಿ ಆರಂಭಿಕ ಠೇವಣಿ ಹಣವನ್ನು ಪಾವತಿಸಬಹುದು. ನಗದು ಸ್ವೀಕರಿಸಲಾಗುವುದಿಲ್ಲ. PAN No. Bank A/C No. and IFSC Code ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು.

ಮು.ತಿ.ನೋ

4. ಸ್ವತ್ತುಗಳನ್ನು ಪ್ರವರ್ಗಗಳಲ್ಲಿ ಮೀಸಲಾತಿಯನ್ವಯ ಕಾಯ್ದಿರಿಸಿ ಹಂಚಿಕೆ ಮಾಡಲಾಗುವುದು.
5. ಆಯಾ ಪ್ರವರ್ಗವಾರು ಅಡಿಯಲ್ಲಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು (SC, ST, BT, Def-Ex.Ser, Cen Govt, St.Govt, Sin Ctzn, Phy.H) ಸಂಬಂಧಿಸಿದ ದೃಢಿಕೃತ ದಾಖಲಾತಿಯನ್ನು ಅರ್ಜಿಯೊಂದಿಗೆ ಸಲ್ಲಿಸವುದು.
6. ನಿವೇಶನಗಳನ್ನು ಒಂದೇ ಇಡಗಂಟಿನ (Outright sale) ಆಧಾರದ ಮೇಲೆ ಹಂಚಿಕೆ ಮಾಡಲಾಗುವುದು.
7. ಅರ್ಜಿ ಸಲ್ಲಿಸುವುದಕ್ಕೆ ಮೊದಲು 10 ವರ್ಷಗಳಿಗೆ ಕಡಿಮೆ ಇಲ್ಲದಷ್ಟು ಕಾಲ ಅರ್ಜಿದಾರರು ಕರ್ನಾಟಕ ರಾಜ್ಯದ ಸಾಮಾನ್ಯ ನಿವಾಸಿಯಾಗಿರುವುದಕ್ಕೆ ಪ್ರಮಾಣಪತ್ರ ಸಲ್ಲಿಸುವುದು.
8. ಅರ್ಜಿದಾರರು ಕರ್ನಾಟಕ ಗೃಹ ಮಂಡಳಿ ಅಥವಾ ಇನ್ನಿತರೆ ಯಾವುದೇ ಸ್ಥಳೀಯ ಸಂಸ್ಥೆ/ ಪ್ರಾಧಿಕಾರದಿಂದಾಗಲಿ ಮನೆ/ನಿವೇಶನ ಪಡೆದಿರುವುದಿಲ್ಲವೆಂದು ನೋಟರಿ ಮೂಲಕ ಪ್ರಮಾಣಿಕರಿಸಿ ಅಫಿಡವಿಟ್ ಸಲ್ಲಿಸಬೇಕು.
9. ಆರ್ಥಿಕ ದುರ್ಬಲ ವರ್ಗದ (EWS) ನಿವೇಶನಗಳನ್ನು ಶೇ.50 ರಷ್ಟು ರಿಯಾಯಿತಿ ದರದಲ್ಲಿ ಹಂಚಿಕೆ ಮಾಡುತ್ತಿರುವುದರಿಂದ, ಆರ್ಥಿಕ ದುರ್ಬಲ ವರ್ಗದ ನಿವೇಶನಗಳಿಗೆ ಅರ್ಜಿ ಸಲ್ಲಿಸುವವರು ತಮ್ಮ ಕುಟುಂಬದ ವಾರ್ಷಿಕ ವರಮಾನ ಗ್ರಾಮೀಣ ಪ್ರದೇಶದ ಅರ್ಜಿದಾರರು ರೂ.32000/– ಮತ್ತು ನಗರ ಪ್ರದೇಶದ ಅರ್ಜಿದಾರರು ವಾರ್ಷಿಕ ವರಮಾನ ರೂ. 87,600/– ಮೀರದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂದಪಟ್ಟ ತಹಸೀಲ್ದಾರರವರಿಂದ ಪಡೆದು ಅರ್ಜಿಯೊಂದಿಗೆ ಸಲ್ಲಿಸುವುದು.
10. ಮನೆ/ನಿವೇಶನ ಹಂಚಿಕೆಗಾಗಿ ಅರ್ಜಿ ಸಲ್ಲಿಸಿ ನೊಂದಣಿ ಪಡೆದ ಅರ್ಜಿದಾರರಿಗೆ ನೊಂದಣಿ ಶುಲ್ಕವನ್ನು ಮರುಪಾವತಿ ಮಾಡಲಾಗುವುದಿಲ್ಲ.
11. ಕರ್ನಾಟಕ ಗೃಹ ಮಂಡಳಿ 1983ರ ಹಂಚಿಕೆ ನಿಯಮಾವಳಿ ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
12. ಅರ್ಜಿಗಳನ್ನು ನಿಗಧಿತ ನೊಂದಣಿ ಶುಲ್ಕ ಮತ್ತು ಆರಂಭಿಕ ಠೇವಣಿ ಪಾವತಿಯೊಂದಿಗೆ ಸಲ್ಲಿಸಲು ಕೊನೆಯ ದಿನಾಂಕಃ **16–01–2020**.
13. ಅರ್ಜಿದಾರರು ಮುಂದಿನ ಪರಾಮರ್ಶೆಗಾಗಿ ಎಲ್ಲಾ ಪತ್ರ ವ್ಯವಹಾರಗಳ ಪ್ರತಿಗಳನ್ನು ತಮ್ಮಲ್ಲಿಟ್ಟುಕೊಂಡು ಪತ್ರ ವ್ಯವಹಾರಗಳಲ್ಲಿ ನೊಂದಣಿ ಸಂಖ್ಯೆಯನ್ನು ತಪ್ಪದೇ ನಮೂದಿಸತಕ್ಕದ್ದು.
14. ಹೆಚ್ಚಿನ ಮಾಹಿತಿಗಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ಗೃಹ ಮಂಡಳಿ, ಸೂರ್ಯನಗರ ಯೋಜನಾ ಕಛೇರಿ, ಸೂರ್ಯನಗರ ಬೆಂಗಳೂರು ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: 080–27804400, ಮೊಬೈಲ್ ಸಂಖ್ಯೆಃ 9483487330/9448070226/9448373762/ 9886647084/9902273111/9448844216 ರಲ್ಲಿ ಸಂಪರ್ಕಿಸಬಹುದು. ಅಥವಾ ಉಪ ಪ್ರಧಾನ ವ್ಯವಸ್ಥಾಪಕರು (ಗ್ರಾಸೇ) ಮತ್ತು ಹಂಚಿಕೆ ಶಾಖೆಯ ಸಹಾಯಕ ಕಂದಾಯ ಅಧಿಕಾರಿಗಳನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆಃ 080–22273511 ext. 335/307/309, ಮೊಬೈಲ್ ನಂ.9483774385/9448579426 ರಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿರುತ್ತದೆ. ಅಲ್ಲದೇ ಹೆಚ್ಚಿನ ಮಾಹಿತಿಗಾಗಿ ಅಂತರಜಾಲ (WEBSITE) www.karnatakahousing.com ಅನ್ನು ಸಂಪರ್ಕಿಸುವುದು.

ದಿನಾಂಕಃ 13–12–2019

ಗೃಹ ಆಯುಕ್ತರು,
ಕರ್ನಾಟಕ ಗೃಹ ಮಂಡಳಿ
ಬೆಂಗಳೂರು